ದಿನಾಂಕ 26-09-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ ರವರಿಂದಃ**

ದಿಃ 03-11-2023 ರಂದು ಬೆಳಗ್ಗೆ 10.30 ಗಂಟೆ ಸಮಯದಲ್ಲಿ ಪೊಲೀಸರು ಘಟನಾ ಸ್ಥಳಕ್ಕೆ ಬಂದಿರುತ್ತಾರೆ. ಘಟನಾ ಸ್ಥಳವನ್ನು ನಾನು, ಚಾಸಾ-2 ಮತ್ತು 3 ರವರ ಸಮಕ್ಷಮದಲ್ಲಿ ಪೊಲೀಸರಿಗೆ ತೋರಿಸಿದ ಮೇರೆಗೆ ಮಹಜರ ಕ್ರಮವನ್ನು ಪೊಲೀಸರು ಬೆಳಗ್ಗೆ 10.30 ರಿಂದ 11.30 ವರೆಗೆ ಜರುಗಿಸಿರುತ್ತಾರೆ. ಪಂಚನಾಮೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತು. ಸದರಿ ಸಮಯದಲ್ಲಿ ಪೊಲೀಸರು 2 ಭಾವ ಚಿತ್ರಗಳನ್ನು ತೆಗೆಸಿಕೊಂಡಿರುತ್ತಾರೆ. ಆ ಸಮಯದಲ್ಲಿ ಘಟನಾ ಸ್ಥಳದಿಂದ ನಾನು ಹಾಜರುಪಡಿಸಿರುವ ಒಂದು ಸಲಿಕೆ ಹಾಗೂ ಒಂದು ಬಡಿಗೆಯನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿರುತ್ತಾರೆ. ನಾನು ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಮರು ಹೇಳಿಕೆಯನ್ನು ನೀಡಿರುವುದಿಲ್ಲ. ನ್ಯಾಯಾಲಯದಲ್ಲಿ ಇಂದು ಹಾಜರು ಇರುವ 1, 2 ಮತ್ತು 7 ನೇ ಆರೋಪಿಯನ್ನು ಸಾಕ್ಷಿ ಗುರುತಿಸುತ್ತಾರೆ.

(ಈ ಹಂತದಲ್ಲಿ 5 ಮತ್ತು 6 ನೇ ಆರೋಪಿಗಳು ನ್ಯಾಯಾಲಯದ ಮುಂದೆ ಗೈರು ಹಾಜರು ಆಗಿದ್ದರಿಂದ ಅವರ ಪರವಾಗಿ ಅವರ ವಕೀಲರು ವಿನಾಯಿತಿ ಅರ್ಜಿಯನ್ನು ಸಲ್ಲಿಸಿದ್ದು ಹಾಗೂ ಅವರ ಗುರುತಿನ ಬಗ್ಗೆ ಯಾವುದೇ ತಕರಾರು ಇಲ್ಲ ಎಂದು ತಿಳಿಸಿರುತ್ತಾರೆ.)

ಸಾಕ್ಷಿಗೆ ಈಗ ಒಂದು ದಾಖಲೆ ತೋರಿಸಲಾಯಿತು ಸದರಿ ದಾಖಲೆ ದೂರು ಆಗಿದ್ದು, ಅದನ್ನು ನಿ.ಪಿ-1 ಹಾಗೂ ಸಾಕ್ಷಿಯ ಸಹಿಯನ್ನು ನಿ.ಪಿ-1(ಎ) ಎಂದು ಗುರುತಿಸಲಾಯಿತು. ಸ್ಥಳ ಮಹಜರನ್ನು ನಿ.ಪಿ-2 ಹಾಗೂ ಸಾಕ್ಷಿಯ ಸಹಿಯನ್ನು ನಿ.ಪಿ-2(ಎ) ಎಂದು ಗುರುತಿಸಲಾಯಿತು. ಆ ಸಮಯದಲ್ಲಿ ತೆಗೆದುಕೊಂಡಿರುವ ಎರಡು ಭಾವ ಚಿತ್ರಗಳಲ್ಲಿ ಸಾಕ್ಷಿಯು ತನ್ನನ್ನು ಹಾಗೂ ವಶಕ್ಕೆ ಪಡೆದುಕೊಂಡಿರುವ ಮುದ್ದೆ ಮಾಲುಗಳನ್ನು ನೋಡಿ ಗುರುತಿಸುತ್ತಾರೆ. ಸದರಿ ಭಾವ ಚಿತ್ರಗಳನ್ನು ನಿ.ಪಿ-3 ಮತ್ತು 4 ಹಾಗೂ ಒಂದು ಸಿ.ಡಿ ಯನ್ನು ನಿ.ಪಿ-5 ಎಂದು ಗುರುತಿಸಲಾಯಿತು.

ನ್ಯಾಯಾಲಯದ ಮುಂದೆ ಇರುವ ಒಂದು ಸಲಿಕೆ ಹಾಗೂ ಒಂದು ಬಡಿಗೆಯನ್ನು ನೋಡಿ ಸಾಕ್ಷಿ ಗುರುತಿಸುತ್ತಾರೆ, ಅವುಗಳನ್ನು ಮು.ಮಾ–1 ಮತ್ತು 2 ಎಂದು ಗುರುತಿಸಲಾಯಿತು.



**(ಈ ಹಂತದಲ್ಲಿ ಮಾನ್ಯ ಎಪಿಪಿ ಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದರು. ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರಿಂದ**

ನಾನು ದಿಃ 02–11–2023 ರಂದು ಪಿರ್ಯಾದನ್ನು ದಾಖಲು ಮಾಡಿರುತ್ತೇನೆ ಎಂದರೆ ಸರಿ. ನಾನು ದಿಃ 03–11–2023 ರಂದು ಪೊಲೀಸರ ಮುಂದೆ ಮುಂದುವರೆದು ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಮುಂದುವರೆದು ಹೇಳಿಕೆಯಲ್ಲಿ ಶಶಿಕಲಾ ಕೋಂ ನಿಂಗಪ್ಪ ಕಾಳಂಗಿ ಹಾಗೂ ರಂಜಿತಾ ತಂದೆ ನಿಂಗಪ್ಪ ಕಾಳಂಗಿ ಇವರು ಜಗಳದಲ್ಲಿ ಭಾಗವಹಿಸಿರುವುದಿಲ್ಲ ಎಂದು ಹೇಳಿರುತ್ತೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿಗಳ ಪರ ಶ್ರೀ ಎಸ್.ಜಿ.ವಿ ವಕೀಲರಿಂದ:**

ಶ್ರೀ. ಎನ್.ಎಂ.ಎಸ್ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿರುತ್ತಾರೆ. ನ್ಯಾಯ ಮತ್ತು ಸಮ್ಮತತೆ ಆಧಾರದ ಮೇರೆಗೆ ಪಾಟೀ ಸವಾಲನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೆ ಸರಿ ಇದೆ ಎಂದು

ಒಪ್ಪಿರುತ್ತಾರೆ.

ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ

ಹಾನಗಲ್ಲ.

ಸಾಕ್ಷಿದಾರರ ಸಹಿ